# ಬಾವಿಗೆ ಬಿದ್ದ ಪಿಕ್‌ಅಪ್ ವಾಹನ: 8 ಮಂದಿ ದುರ್ಮರಣ

**ಮುಂಬೈ:** ಮಹಾರಾಷ್ಟ್ರದ ಸೋಲಾಪುರ ಜಿಲ್ಲೆಯ ಮಲ್ಶಿರಾಸ್ ತಹಸಿಲ್‌ನ ತಂಡುಲ್ವಾಡಿ ಗ್ರಾಮದ ಬಳಿ ಭೀಕರ ರಸ್ತೆ ಅಪಘಾತ ಸಂಭವಿಸಿದ್ದು, ಪಿಕ್‌ಅಪ್ ವಾಹನವೊಂದು ನಿಯಂತ್ರಣ ತಪ್ಪಿ ರಸ್ತೆ ಬದಿಯ ತೆರೆದ ಬಾವಿಗೆ ಉರುಳಿ ಬಿದ್ದ ಪರಿಣಾಮ ಎಂಟು ಮಂದಿ ಸಾವನ್ನಪ್ಪಿದ್ದಾರೆ. ಮೃತರಲ್ಲಿ ನಾಲ್ವರು ಮಹಿಳೆಯರು ಮತ್ತು ನಾಲ್ವರು ಮಕ್ಕಳು ಸೇರಿರುವುದು ದುರಂತಕ್ಕೆ ಮತ್ತಷ್ಟು ಮರುಕ ತಂದಿದೆ. ಘಟನೆಯಲ್ಲಿ ಏಳು ಮಂದಿ ಗಾಯಗೊಂಡಿದ್ದು, ಸ್ಥಳೀಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.



ಮಾಹಿತಿಯ ಪ್ರಕಾರ, ಪಂಢರಪುರ ಮೂಲದ 15 ಮಂದಿ ಮಾಸ್ವಾಡ್ ಪ್ರದೇಶದಲ್ಲಿರುವ ಪ್ರಸಿದ್ಧ ದೇವಸ್ಥಾನಕ್ಕೆ ಭೇಟಿ ನೀಡಿ ಹಿಂತಿರುಗುತ್ತಿದ್ದರು. ವಾಹನದಲ್ಲಿದ್ದವರು ಪರಸ್ಪರ ಸಂಬಂಧಿಕರು ಹಾಗೂ ನೆರೆಹೊರೆಯವರಾಗಿದ್ದು, ಭಾನುವಾರ ಸಂಜೆ ಸುಮಾರು 5 ಗಂಟೆ ವೇಳೆಗೆ ಈ ದುರ್ಘಟನೆ ಸಂಭವಿಸಿದೆ.

ಪ್ರತ್ಯಕ್ಷದರ್ಶಿಗಳ ಪ್ರಕಾರ, ಪಿಕ್‌ಅಪ್ ವಾಹನವು ವೇಗವಾಗಿ ಚಲಿಸುತ್ತಿದ್ದ ವೇಳೆ ಚಾಲಕನ ನಿಯಂತ್ರಣ ತಪ್ಪಿದೆ. ರಸ್ತೆ ತಿರುವಿನಲ್ಲಿ ವಾಹನವನ್ನು ನಿಯಂತ್ರಿಸಲು ಸಾಧ್ಯವಾಗದೆ ಅದು ರಸ್ತೆ ಬದಿಯ ಜಮೀನಿಗೆ ನುಗ್ಗಿ, ಅಲ್ಲಿದ್ದ ತೆರೆದ ಬಾವಿಗೆ ಉರುಳಿ ಬಿದ್ದಿದೆ. ಘಟನೆಯ ತೀವ್ರತೆಗೆ ವಾಹನದಲ್ಲಿದ್ದ ಹಲವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಸುದ್ದಿ ತಿಳಿಯುತ್ತಿದ್ದಂತೆ ಸ್ಥಳೀಯ ಪೊಲೀಸರು, ಅಗ್ನಿಶಾಮಕ ಸಿಬ್ಬಂದಿ ಹಾಗೂ ರಕ್ಷಣಾ ತಂಡಗಳು ಘಟನಾ ಸ್ಥಳಕ್ಕೆ ಧಾವಿಸಿ ಕಾರ್ಯಾಚರಣೆ ಆರಂಭಿಸಿದವು. ಬಾವಿಯಲ್ಲಿ ಸಿಲುಕಿದ್ದ ವಾಹನವನ್ನು ಕ್ರೇನ್ ಸಹಾಯದಿಂದ ಮೇಲೆತ್ತಿ ರಕ್ಷಣಾ ಕಾರ್ಯ ಕೈಗೊಳ್ಳಲಾಯಿತು. ಆದರೆ ಅಷ್ಟರಲ್ಲಾಗಲೇ ಎಂಟು ಮಂದಿ ಪ್ರಾಣ ಕಳೆದುಕೊಂಡಿದ್ದರು.

ಸೋಲಾಪುರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅತುಲ್ ಕುಲಕರ್ಣಿ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಗಾಯಾಳುಗಳನ್ನು ತಕ್ಷಣವೇ ಸ್ಥಳೀಯ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೆಲವರು ಪ್ರಾಥಮಿಕ ಚಿಕಿತ್ಸೆ ಪಡೆದ ಬಳಿಕ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ.

**ಸಿಎಂ ಫಡ್ನವೀಸ್ ಸಂತಾಪ, 5 ಲಕ್ಷ ಪರಿಹಾರ ಘೋಷಣೆ:** ಘಟನೆಯ ಬಗ್ಗೆ ತೀವ್ರ ಸಂತಾಪ ವ್ಯಕ್ತಪಡಿಸಿರುವ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಮೃತರ ಕುಟುಂಬಗಳಿಗೆ ತಲಾ 5 ಲಕ್ಷ ಪರಿಹಾರ ಘೋಷಿಸಿದ್ದಾರೆ. ಜೊತೆಗೆ ಗಾಯಾಳುಗಳ ಚಿಕಿತ್ಸೆಯ ಸಂಪೂರ್ಣ ವೆಚ್ಚವನ್ನು ರಾಜ್ಯ ಸರ್ಕಾರವೇ ಭರಿಸಲಿದೆ ಎಂದು ತಿಳಿಸಿದ್ದಾರೆ.

"ಈ ಅಪಘಾತ ಅತ್ಯಂತ ಹೃದಯವಿದ್ರಾವಕವಾಗಿದೆ. ಮಕ್ಕಳು ಮತ್ತು ಮಹಿಳೆಯರು ಪ್ರಾಣ ಕಳೆದುಕೊಂಡಿರುವುದು ನೋವಿನ ಸಂಗತಿ. ಭವಿಷ್ಯದಲ್ಲಿ ಇಂತಹ ಘಟನೆಗಳು ಮರುಕಳಿಸದಂತೆ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಬೇಕು" ಎಂದು ಫಡ್ನವೀಸ್ ಹೇಳಿದ್ದಾರೆ.

ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆ ಬದಿಯ ತೆರೆದ ಬಾವಿಗಳು ಹಾಗೂ ಸುರಕ್ಷತಾ ವ್ಯವಸ್ಥೆಗಳ ಕೊರತೆ ಅನೇಕ ಬಾರಿ ಜೀವಹಾನಿಗೆ ಕಾರಣವಾಗುತ್ತಿದೆ. ಇಂತಹ ಅಪಘಾತಗಳು ಮರುಕಳಿಸದಂತೆ ಅಪಾಯಕಾರಿಯಾದ ತೆರೆದ ಬಾವಿಗಳನ್ನು ಮುಚ್ಚುವುದು ಹಾಗೂ ರಸ್ತೆಗಳ ಬಳಿ ಅಗತ್ಯ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

# ಅಭಿಮಾನವನ್ನು ಸಾರ್ವಜನಿಕರ ಒಳ್ಳೆಯ ಕೆಲಸಗಳಿಗೆ ಉಪಯೋಗಿಸಿ: ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯ



**ತಾಂಡವಪುರ:** ನಮ್ಮ ಮೇಲಿನ ಪ್ರೀತಿ ಅಭಿಮಾನವನ್ನು ಸಾರ್ವಜನಿಕರ ಕೆಲಸಗಳಿಗೆ ಉಪಯೋಗಿಸುವ ಮೂಲಕ ಜನರ ಸೇವೆಯನ್ನು ಮಾಡಿ ಅದೇ ನೀವು ನಮಗೆ ತೋರುವ ಪ್ರೀತಿ ವಿಶ್ವಾಸ ಎಂದು ನೂತನ ಸಚಿವ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯನವರು

ಕಾಂಗ್ರೆಸ್ ಪಕ್ಷದ ಅಭಿಮಾನಿಗಳು ಕಾರ್ಯಕರ್ತರು ಹಾಗೂ ಅವರ ಅಭಿಮಾನಿ ಬಳಗದವರಿಗೆ ಕರೆ ನೀಡಿದರು

ನಂಜನಗೂಡು ತಾಲೂಕು ಚಿಕ್ಕಯ್ಯನ ಛತ್ರ ಹೋಬಳಿ ವರುಣ ವಿಧಾನಸಭಾ ಕ್ಷೇತ್ರಕ್ಕೆ ಸೇರುವ ಕೆಂಪಿ ಸಿದ್ದನ ಹುಂಡಿ ಗ್ರಾಮದ ಯುವ ಮುಖಂಡ ಕೆ ಆರ್ ರವಿಕುಮಾರ್ ಅವರು ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯ ರವರ ಹೆಸರಿನ ಫೌಂಡೇಶನ್ ಸ್ಥಾಪಿಸಿ ಅಧ್ಯಕ್ಷರಾಗಿರುವ ರವಿಕುಮಾರ್ ರವರು ಡಾಕ್ಟರ್ ಯತೀಂದ್ರ ಸಿದ್ರಾಮಯ್ಯನವರ ಅಭಿಮಾನದಿಂದ ರವಿಕುಮಾರ್ ರವರು ತಮ್ಮ ಕೈಗೆ ಡಾ. ಯತೀಂದ್ರ ಸಿದ್ದರಾಮಯ್ಯನವರ ಭಾವಚಿತ್ರದ ಹಸಿರು ಅಚ್ಚೆಯನ್ನು ಕೈಯಲ್ಲಿ ಹಾಕಿಸಿಕೊಂಡು ತೋರಿಸುವ ಮೂಲಕ ತಮ್ಮ ಅಭಿಮಾನವನ್ನು ಈ ರೀತಿ ವ್ಯಕ್ತಪಡಿಸುತ್ತಿದ್ದರು

ರವಿಕುಮಾರ್ ಅವರ ಕೈಯನ್ನು ನೂತನ ಸಚಿವರಾದ ಡಾಕ್ಟರ್ ಯತೀಂದ್ರ ಸಿದ್ರಾಮಯ್ಯನವರು ನೋಡುವ ಮೂಲಕ ಸಂತಸ ವ್ಯಕ್ತಪಡಿಸಿ ನಮ್ಮ ಮೇಲಿನ ಅಭಿಮಾನ ಪ್ರೀತಿ ವಿಶ್ವಾಸಕ್ಕೆ ನಾವು ಸದಾ ಆಭಾರಿಯಾಗಿರುತ್ತವೆ, ಅದೇ ರೀತಿ ನಮ್ಮ ಮೇಲೆ ನಿಮಗೆ ಅಭಿಮಾನವಿದ್ದರೆ ಕ್ಷೇತ್ರದ ಸಾರ್ವಜನಿಕರಿಗೆ ಬಡವರಿಗೆ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ರೀತಿಯಲ್ಲಿ ಒಳ್ಳೆಯ ಕೆಲಸಗಳನ್ನು ಮಾಡಿ ತೋರಿಸಿ ಅದೇ ನಮಗೆ ನೀವು ನಮಗೆ ತೋರುವ ತುಂಬು ಹೃದಯದ ಅಭಿಮಾನ ಎಂದು ಅಭಿಮಾನಿಗಳಿಗೆ ಕಾರ್ಯಕರ್ತರಿಗೆ ತಿಳಿಸಿದರು

ಈ ಸಂದರ್ಭದಲ್ಲಿ ಡಾಕ್ಟರ್ ಯತೀಂದ್ರ ಸಿದ್ರಾಮಯ್ಯನವರ ಫೌಂಡೇಶನ್ ಅಧ್ಯಕ್ಷ ಕೆ ಆರ್ ರವಿಕುಮಾರ್ ಹಾಗೂ ಪಕ್ಷದ ಕಾರ್ಯಕರ್ತರು ಅಭಿಮಾನಿಗಳು ಹಾಜರಿದ್ದರು

# ಏಕಾಏಕಿ ನಿಲ್ದಾಣಕ್ಕೆ ನುಗ್ಗಿದ ಕೆಎಸ್‌ಆರ್‌ಟಿಸಿ ಬಸ್: ವ್ಯಕ್ತಿಗೆ ಡಿಕ್ಕಿ, ಗಂಭೀರ ಗಾಯ



**ಹಾಸನ:** ನಿಯಂತ್ರಣ ತಪ್ಪಿದ ಕೆಎಸ್‌ಆರ್‌ಟಿಸಿ ಬಸ್‌ವೊಂದು ಬಸ್ ನಿಲ್ದಾಣದೊಳಗೆ ನುಗ್ಗಿದ್ದು, ಈ ವೇಳೆ ಅಲ್ಲಿದ್ದ ವ್ಯಕ್ತಿಗೆ ಡಿಕ್ಕಿ ಹೊಡೆದ ಪರಿಣಾಮ ವ್ಯಕ್ತಿ ಗಂಭೀರ ಗಾಯಗೊಂಡ ಘಟನೆ ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ನೂತನ ಬಸ್ ನಿಲ್ದಾಣದಲ್ಲಿ ಭಾನುವಾರ ತಡರಾತ್ರಿ ನಡೆದಿದೆ.

ಬೆಂಗಳೂರು–ಧರ್ಮಸ್ಥಳ ಮಾರ್ಗದಲ್ಲಿ ಸಂಚರಿಸುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ (ಕೆಎ–21 ಎಫ್–0151) ರಾತ್ರಿ ಸುಮಾರು 11 ಗಂಟೆ ವೇಳೆಗೆ ಚನ್ನರಾಯಪಟ್ಟಣ ನೂತನ ಬಸ್ ನಿಲ್ದಾಣಕ್ಕೆ ಪ್ರವೇಶಿಸುವ ವೇಳೆ ನಿಯಂತ್ರಣ ತಪ್ಪಿದೆ ಎನ್ನಲಾಗಿದೆ.

ಬಸ್ ಅನ್ನು ನಿಲುಗಡೆ ಮಾಡಲು ಚಾಲಕ ಮುಂದಾದಾಗ ಅದು ವೇಗವಾಗಿ ನಿಲ್ದಾಣದ ಒಳಭಾಗಕ್ಕೆ ನುಗ್ಗಿ ಅಲ್ಲಿದ್ದ ವ್ಯಕ್ತಿಗೆ ಡಿಕ್ಕಿ ಹೊಡೆದಿದೆ.

ಗಾಯಗೊಂಡ ವ್ಯಕ್ತಿಯನ್ನು ಚಿಕ್ಕಮಗಳೂರು ಮೂಲದ ಮಂಜುನಾಥ್ ಎಂದು ಗುರುತಿಸಲಾಗಿದೆ. ಅವಘಡದಲ್ಲಿ ಅವರ ಎದೆ ಹಾಗೂ ಎಡಗೈಗೆ ಗಂಭೀರ ಗಾಯಗಳಾಗಿವೆ ಎಂದು ತಿಳಿದುಬಂದಿದೆ.ಬಸ್ ಡಿಕ್ಕಿ ಹೊಡೆಯುತ್ತಿದ್ದಂತೆಯೇ ಸ್ಥಳೀಯರು ಹಾಗೂ ಪ್ರಯಾಣಿಕರು ತಕ್ಷಣವೇ ಗಾಯಾಳುವಿನ ನೆರವಿಗೆ ಧಾವಿಸಿ ಸಮೀಪದ ಆಸ್ಪತ್ರೆಗೆ ದಾಖಲಿಸಿದ್ದಾರೆ. ಸದ್ಯ ಅವರ ಸ್ಥಿತಿ ಗಂಭೀರವಾಗಿದೆ ಎಂದು ಮೂಲಗಳು ತಿಳಿಸಿವೆ.

ಘಟನಾ ಸ್ಥಳದ ವಿಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಬಸ್ ನಿಲ್ದಾಣದಲ್ಲಿ ಕುಳಿತಿದ್ದ ಮಂಜುನಾಥ್ ಅವರು ಗಾಯಗೊಂಡಿರುವುದು, ಸುತ್ತಮುತ್ತಲಿನ ಜನರು ಅವರಿಗೆ ನೆರವು ನೀಡುತ್ತಿರುವ ಕಂಡು ಬಂದಿದೆ.

ಈ ಅವಘಡ ಪ್ರಯಾಣಿಕರು ಹಾಗೂ ಸ್ಥಳೀಯರಲ್ಲಿ ಆತಂಕ ಮೂಡಿಸಿದೆ. ಇದೇ ಬಸ್ ನಿಲ್ದಾಣದಲ್ಲಿ ಕೆಲವು ವರ್ಷಗಳ ಹಿಂದೆ ಇದೇ ರೀತಿಯ ಅಪಘಾತ ಸಂಭವಿಸಿದ್ದ ಹಿನ್ನೆಲೆಯಲ್ಲಿ ಕೆ–ಎಸ್‌ಆರ್‌ಟಿಸಿ ನಿಲ್ದಾಣದೊಳಗೆ ವೇಗ ನಿಯಂತ್ರಣ ಸೇರಿದಂತೆ ಹಲವು ಸುರಕ್ಷತಾ ಕ್ರಮಗಳನ್ನು ಜಾರಿಗೆ ತಂದಿತ್ತು.

ಆದರೆ, ಮತ್ತೊಮ್ಮೆ ಇಂತಹ ಘಟನೆ ನಡೆದಿರುವುದು ಸುರಕ್ಷತಾ ಕ್ರಮಗಳ ಅನುಷ್ಠಾನದ ಬಗ್ಗೆ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಬಸ್ ನಿಯಂತ್ರಣ ತಪ್ಪಲು ನಿಖರ ಕಾರಣವೇನು ಎಂಬುದರ ಕುರಿತು ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ.

# ಪಬ್‌ನಲ್ಲಿ ಭೀಕರ ಅಗ್ನಿ ದುರಂತ; ಇಬ್ಬರು ಸುಟ್ಟು ಕರಕಲು, 7 ಮಂದಿ ಸ್ಥಿತಿ ಗಂಭೀರ!

**ಮೈಸೂರು:** ನಗರದ ದಟ್ಟಗಳ್ಳಿ 4ನೇ ಹಂತದ ಬಳಿಯಿರುವ 'ಫಾಕ್ಸ್ ಡೆನ್ ಲಿಕ್ಕರ್ ಗ್ಯಾರೇಜ್' ಪಬ್‌ನಲ್ಲಿ ಭಾನುವಾರ ರಾತ್ರಿ ಸಂಭವಿಸಿದ ಭೀಕರ ಅಗ್ನಿ ಅವಘಡದಲ್ಲಿ ಇಬ್ಬರು ಸಜೀವ ದಹನಗೊಂಡು ಮೃತಪಟ್ಟಿದ್ದು, ಏಳು ಮಂದಿ ಗಂಭೀರವಾಗಿ ಗಾಯಗೊಂಡಿರುವ ಘಟನೆ ಆತಂಕಕ್ಕೆ ಕಾರಣವಾಗಿದೆ. ಅಗ್ನಿ ಅವಘಡ ಸಂಭವಿಸಿದ ವೇಳೆ ಪಬ್‌ನಲ್ಲಿ 25ಕ್ಕೂ ಹೆಚ್ಚು ಮಂದಿ ಇದ್ದರೆಂದು ತಿಳಿದುಬಂದಿದೆ.

ಮೃತರನ್ನು ಶಾಹಿಲ್ ಹಾಗೂ ಪ್ರಕಾಶ್ ಎಂದು ಗುರುತಿಸಲಾಗಿದ್ದು, ಗಾಯಗೊಂಡವರನ್ನು ನಗರದ ವಿವಿಧ ಆಸ್ಪತ್ರೆಗಳಿಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಗಾಯಾಳುಗಳಲ್ಲಿ ಕೆಲವರ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಪ್ರಾಥಮಿಕ ಮಾಹಿತಿಯ ಪ್ರಕಾರ, ಪಬ್‌ನ ಅಡುಗೆ ಕೋಣೆಯಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡಿದೆ. ಆರಂಭದಲ್ಲಿ ಸಣ್ಣ ಪ್ರಮಾಣದಲ್ಲಿದ್ದ ಬೆಂಕಿ ಕೆಲವೇ ನಿಮಿಷಗಳಲ್ಲಿ ಇಡೀ ಪಬ್‌ಗೆ ವ್ಯಾಪಿಸಿದ್ದು, ಕಟ್ಟಡವನ್ನು ದಟ್ಟ ಕಪ್ಪು ಹೊಗೆ ಆವರಿಸಿದೆ. ಹೊಗೆ ಹಾಗೂ ಬೆಂಕಿಯ ತೀವ್ರತೆಗೆ ಒಳಗಿದ್ದ ಹಲವರು ಹೊರಬರಲು ಹರಸಾಹಸ ಪಟ್ಟಿದ್ದಾರೆ.

ಪ್ರತ್ಯಕ್ಷದರ್ಶಿಗಳ ಪ್ರಕಾರ, ಬೆಂಕಿ ಕಾಣಿಸಿಕೊಂಡ ಕೆಲವೇ ಕ್ಷಣಗಳಲ್ಲಿ ಸ್ಫೋಟದಂತಹ ಶಬ್ದ ಕೇಳಿಬಂದಿದ್ದು, ಅಡುಗೆ ಅನಿಲ ಸಿಲಿಂಡರ್ ಸ್ಫೋಟದಿಂದ ಈ ದುರಂತ ಸಂಭವಿಸಿರಬಹುದೆಂಬ ಶಂಕೆ ವ್ಯಕ್ತವಾಗಿದೆ. ಆದರೆ ಅಗ್ನಿ ಅವಘಡಕ್ಕೆ ನಿಖರ ಕಾರಣ ಏನು ಎಂಬುದು ತನಿಖೆ ಬಳಿಕವೇ ಸ್ಪಷ್ಟವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.




ದುರಂತ ಸಂಭವಿಸಿದ ವೇಳೆ ಪಬ್‌ನಲ್ಲಿ ಗ್ರಾಹಕರು ಹಾಗೂ ಸಿಬ್ಬಂದಿ ಸೇರಿ 25ಕ್ಕೂ ಹೆಚ್ಚು ಮಂದಿ ಇದ್ದರು ಎನ್ನಲಾಗಿದೆ. ಬೆಂಕಿ ವೇಗವಾಗಿ ವ್ಯಾಪಿಸಿದ್ದರಿಂದ ಕೆಲವರು ಹೊರಬರಲು ಸಾಧ್ಯವಾಗದೇ ಒಳಗೇ ಸಿಲುಕಿಕೊಂಡಿದ್ದರು. ಸ್ಥಳೀಯರು ಹಾಗೂ ಸಿಬ್ಬಂದಿಯ ಸಹಾಯದಿಂದ 15ಕ್ಕೂ ಹೆಚ್ಚು ಮಂದಿಯನ್ನು ಸುರಕ್ಷಿತವಾಗಿ ಹೊರತೆಗೆದು ರಕ್ಷಿಸಲಾಗಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ಅಗ್ನಿಶಾಮಕ ದಳದ ಸಿಬ್ಬಂದಿ ಹಲವು ವಾಹನಗಳೊಂದಿಗೆ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ಆರಂಭಿಸಿದರು. ಬೆಂಕಿಯ ತೀವ್ರತೆ ಹೆಚ್ಚಿದ್ದ–ರಿಂದ ಅದನ್ನು ನಿಯಂತ್ರಣಕ್ಕೆ ತರಲು ಸಿಬ್ಬಂದಿ ಸಾಕಷ್ಟು ಹರಸಾಹಸ ಪಡಬೇಕಾಯಿತು. ಹಲವು ಗಂಟೆಗಳ ಕಾರ್ಯಾಚರಣೆ ಬಳಿಕ ಬೆಂಕಿಯನ್ನು ಸಂಪೂರ್ಣವಾಗಿ ನಂದಿಸಲಾಗಿದೆ.

ಅಗ್ನಿ ಅವಘಡದಿಂದ ಪಬ್‌ನ ಒಳಭಾಗದಲ್ಲಿದ್ದ ಪೀಠೋಪಕರಣಗಳು, ವಿದ್ಯುತ್ ಉಪಕರಣಗಳು ಹಾಗೂ ಇತರೆ ವಸ್ತುಗಳು ಸಂಪೂರ್ಣ ಸುಟ್ಟು ಕರಕಲಾಗಿದ್ದು, ಲಕ್ಷಾಂತರ ರೂಪಾಯಿ ಮೌಲ್ಯದ ಆಸ್ತಿ ನಷ್ಟ ಸಂಭವಿಸಿರುವ ಸಾಧ್ಯತೆಯಿದೆ ಎಂದು ಅಂ–ದಾಜಿಸಲಾಗಿದೆ.

ಸಿಲಿಂಡರ್ ಸ್ಫೋಟದಿಂದ ಗಾಯಗೊಂಡಿರುವ ಪಬ್ ಸಿಬ್ಬಂದಿ ಮತ್ತು ಗ್ರಾಹಕರ ದೇಹದ ವಿವಿಧ ಭಾಗಗಳಿಗೆ ಸುಟ್ಟ ಗಾಯಗಳಾಗಿದ್ದು, ಅವರನ್ನು ತಕ್ಷಣವೇ ಆಸ್ಪತ್ರೆಗೆ ದಾಖಲಿಸಲಾಗಿದೆ. ಕೆಲವರ ಸ್ಥಿತಿ ಚಿಂತಾಜನಕವಾಗಿರುವುದರಿಂದ ಸಾವಿನ ಸಂಖ್ಯೆ ಹೆಚ್ಚಾಗುವ ಆತಂಕವೂ ಎದುರಾಗಿದೆ.

ಘಟನಾ ಸ್ಥಳಕ್ಕೆ ಮೈಸೂರು ನಗರದ ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಜಿಲ್ಲಾ ಆಡಳಿತದ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಗ್ನಿ ಅವಘಡಕ್ಕೆ ನಿಖರ ಕಾರಣ ಪತ್ತೆಹಚ್ಚಲು ತಾಂತ್ರಿಕ ತಜ್ಞರಿಂದಲೂ ಪರಿಶೀಲನೆ ನಡೆಸಲಾಗುತ್ತಿದೆ.

ಈ ಸಂಬಂಧ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಪಬ್‌ನಲ್ಲಿ ಅಗ್ನಿ ಸುರಕ್ಷತಾ ಕ್ರಮಗಳನ್ನು ಸಮರ್ಪಕವಾಗಿ ಪಾಲಿಸಲಾಗಿತ್ತೇ, ಅಗ್ನಿಶಾಮಕ ಇಲಾಖೆಯಿಂದ ಅಗತ್ಯ ಅನುಮತಿ ಪಡೆಯಲಾಗಿತ್ತೇ ಎಂಬ ಬಗ್ಗೆ ತನಿಖೆ ಕೈಗೊಂಡಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ ಪಬ್‌ಗಳು, ರೆಸ್ಟೋರೆಂಟ್‌ಗಳು ಮತ್ತು ವಾಣಿಜ್ಯ ಕಟ್ಟಡಗಳಲ್ಲಿ ಸಂಭವಿಸುತ್ತಿರುವ ಅಗ್ನಿ ಅವಘಡಗಳು ಹೆಚ್ಚುತ್ತಿರುವುದು ಆತಂಕಕ್ಕೆ ಕಾರಣವಾಗಿದೆ. ಅಗ್ನಿ ಸುರಕ್ಷತಾ ಸಾಧನಗಳು, ತುರ್ತು ನಿರ್ಗಮನ ವ್ಯವಸ್ಥೆಗಳು ಹಾಗೂ ನಿಯಮಿತ ಸುರಕ್ಷತಾ ತಪಾಸಣೆ ಕಡ್ಡಾಯವಾಗಿದ್ದರೂ, ಹಲವು ಕಡೆ ನಿಯಮ ಉಲ್ಲಂಘನೆ ನಡೆಯುತ್ತಿರುವ ಆರೋಪಗಳು ಕೇಳಿಬರುತ್ತಿವೆ. ಮೈಸೂರಿನ ಈ ದುರಂತ ಕೂಡ ಅಗ್ನಿ ಸುರಕ್ಷತಾ ಕ್ರಮಗಳ ಮಹತ್ವವನ್ನು ಮತ್ತೊಮ್ಮೆ ನೆನಪಿಸಿದೆ.

# ಇಂಧನಕ್ಕೆ ನಿರಾಕರಣೆ: ಟ್ರ್ಯಾಕ್ಟರ್‌ಗಳೊಂದಿಗೆ ಬಂಕ್‌ಗೆ ಮುತ್ತಿಗೆ ಹಾಕಿದ ರೈತರು



**ಚಿಕ್ಕಬಳ್ಳಾಪುರ:** ಪ್ಲಾಸ್ಟಿಕ್ ಕ್ಯಾನ್‌ಗಳಿಗೆ ಪೆಟ್ರೋಲ್ ಹಾಗೂ ಡೀಸೆಲ್ ನೀಡಲು ನಿರಾಕರಿಸಿದ ಹಿನ್ನೆಲೆಯಲ್ಲಿ ರೈತರು ಪೆಟ್ರೋಲ್ ಬಂಕ್‌ಗೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದ ಘಟನೆ ಚಿಕ್ಕಬಳ್ಳಾಪುರದಲ್ಲಿ ನಡೆದಿದೆ. ಈ ವೇಳೆ ಆಕ್ರೋಶಗೊಂಡ ರೈತರು ಹೆದ್ದಾರಿ ತಡೆ ನಡೆಸಿದ್ದು, ಕೆಲಕಾಲ ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡು ಸಾರ್ವಜನಿಕರು ಪರದಾಡುವಂತಾಯಿತು.

ನಗರದ ಜಿಲ್ಲಾಡಳಿತ ಭವನದ ಸಮೀಪದಲ್ಲಿರುವ ಭಾರತ್ ಪೆಟ್ರೋಲಿಯಂ ಪೆಟ್ರೋಲ್ ಬಂಕ್ ಎದುರು ಜಮಾಯಿಸಿದ ರೈತರು, ಪ್ಲಾಸ್ಟಿಕ್ ಕ್ಯಾನ್‌ಗಳಲ್ಲಿ ಇಂಧನ ನೀಡದ ಕ್ರಮವನ್ನು ಖಂಡಿಸಿ ಪ್ರತಿಭಟನೆ ನಡೆಸಿದರು. ಕೃಷಿ ಚಟುವಟಿ–ಕೆಗಳಿಗೆ ಅಗತ್ಯವಾಗಿರುವ ಪೆಟ್ರೋಲ್ ಮತ್ತು ಡೀಸೆಲ್ ಅನ್ನು ಕ್ಯಾನ್‌ಗಳಲ್ಲಿ ನೀಡದಿರುವುದು ರೈತರಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ರೈತರು ಟ್ರ್ಯಾಕ್ಟರ್‌ಗಳು, ಪವರ್ ಟಿಲ್ಲರ್‌ಗಳು ಹಾಗೂ ಇತರೆ ಕೃಷಿ ಯಂತ್ರೋಪಕರಣಗಳೊಂದಿಗೆ ಬಂಕ್‌ಗೆ ಆಗಮಿಸಿ ಬಂಕ್ ಮಾಲೀಕ ಸಂದೀಪ್ ಅವರೊಂದಿಗೆ ವಾಗ್ವಾದ ನಡೆಸಿದರು. ಹೊಲಗದ್ದೆಗಳಲ್ಲಿ ಬಳಸುವ ಯಂತ್ರೋಪಕರಣಗಳಿಗೆ ಇಂಧನ ತುಂಬಿಸಲು ಕ್ಯಾನ್‌ಗಳ ಅಗತ್ಯವಿದ್ದು, ಪ್ಲಾಸ್ಟಿಕ್ ಕ್ಯಾನ್‌ಗಳಿಗೆ ಇಂಧನ ನಿರಾಕರಿಸುವುದರಿಂದ ಕೃಷಿ ಚಟುವಟಿ–ಕೆಗಳ ಮೇಲೆ ಪರಿಣಾಮ ಬೀಳುತ್ತಿದೆ ಎಂದು ರೈತರು ಆರೋಪಿಸಿದರು.

**'ರೈತರಿಗೆ ಇಂಧನ ಇಲ್ಲದಿದ್ದರೆ ಬೇರೆ ಯಾರಿಗೂ ಕೊಡಬೇಡಿ':** ಪ್ರತಿಭಟನಾಕಾರರು, ರೈತರಿಗೆ ಇಂಧನ ನೀಡದೇ ಇತರರಿಗೆ ಮಾರಾಟ ಮಾಡುವುದು ಸರಿಯಲ್ಲ ಎಂದು ವಾದಿಸಿದರು. ಕೃಷಿ ಚಟುವಟಿಕೆಗಳಿಗೆ ವಿನಾಯಿತಿ ನೀಡಬೇಕು ಹಾಗೂ ರೈತರಿಗಾಗಿ ಪ್ರತ್ಯೇಕ ವ್ಯವಸ್ಥೆ ಮಾಡಬೇಕು ಎಂದು ಒತ್ತಾಯಿಸಿದರು.

ಇತ್ತೀಚೆಗೆ ಸುರಕ್ಷತಾ ಕಾರಣಗಳನ್ನು ಮುಂದಿಟ್ಟುಕೊಂಡು ಪ್ಲಾಸ್ಟಿಕ್ ಕ್ಯಾನ್‌ಗಳಲ್ಲಿ ಇಂಧನ ಪೂರೈಕೆಗೆ ಹಲವು ಕಡೆ ನಿರ್ಬಂಧ ಹೇರಲಾಗಿದೆ. ಆದರೆ ಈ ನಿಯಮಗಳಿಂದ ಗ್ರಾಮೀಣ ಭಾಗದ ರೈತರು ಸಂಕಷ್ಟ ಎದುರಿಸುತ್ತಿದ್ದಾರೆ ಎಂಬುದು ರೈತರ ವಾದವಾಗಿದೆ.

**ಹೆದ್ದಾರಿ ತಡೆದು ಆಕ್ರೋಶ:** ಪೆಟ್ರೋಲ್ ಬಂಕ್ ಸಿಬ್ಬಂದಿ ಹಾಗೂ ರೈತರ ನಡುವೆ ಮಾತುಕತೆ ಫಲಕಾರಿಯಾಗದ ಹಿನ್ನೆಲೆಯಲ್ಲಿ ಆಕ್ರೋಶಗೊಂಡ ರೈತರು ಚಿಕ್ಕಬಳ್ಳಾಪುರ–ಶಿಡ್ಲಘಟ್ಟ ಹೆದ್ದಾರಿಗೆ ಇಳಿದು ಪ್ರತಿಭಟನೆ ನಡೆಸಿದರು. ರಸ್ತೆಯ ಮಧ್ಯೆಯೇ ಟ್ರ್ಯಾಕ್ಟರ್‌ಗಳು ಮತ್ತು ಪವರ್ ಟಿಲ್ಲರ್‌ಗಳನ್ನು ನಿಲ್ಲಿಸಿ ಸಂಚಾರಕ್ಕೆ ಅಡ್ಡಿಪಡಿಸಿದರು.

ಇದರಿಂದ ಕೆಲಕಾಲ ಹೆದ್ದಾರಿಯಲ್ಲಿ ವಾಹನ ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡಿತು. ಎರಡೂ ಬದಿಗಳಲ್ಲಿ ವಾಹನಗಳ ಸಾಲು ನಿರ್ಮಾಣವಾಗಿದ್ದು, ಕೆಲಸ ಕಾರ್ಯಗಳಿಗೆ ತೆರಳುತ್ತಿದ್ದ ಪ್ರಯಾಣಿಕರು ಹಾಗೂ ವಾಹನ ಸವಾರರು ಪರದಾಡುವಂತಾಯಿತು.

ಹೆದ್ದಾರಿ ತಡೆ ಹಿನ್ನೆಲೆಯಲ್ಲಿ ತುರ್ತು ಸೇವೆಗಳಿಗೂ ಅಡಚಣೆ ಉಂಟಾಗುವ ಆತಂಕ ಎದುರಾಯಿತು. ಸಂಚಾರ ದಟ್ಟಣೆ ಹೆಚ್ಚಾಗುತ್ತಿದ್ದಂತೆ ಸಾರ್ವಜನಿಕರು ಪ್ರತಿಭಟನೆಯ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು.

**ರೈತರು–ಸಾರ್ವಜನಿಕರ ನಡುವೆ ವಾಗ್ವಾದ:** ಹೆದ್ದಾರಿ ಬಂದ್‌ನಿಂದ ಕಿರಿಕಿರಿಗೊಂಡ ಕೆಲ ಸಾರ್ವಜನಿಕರು ರೈತರ ಕ್ರಮವನ್ನು ಪ್ರಶ್ನಿಸಿದರು. ಇದರಿಂದ ರೈತರು ಮತ್ತು ಸಾರ್ವಜನಿಕರ ನಡುವೆ ವಾಗ್ವಾದ ನಡೆಯಿತು. ರೈತರ ಸಮಸ್ಯೆ ಪರಿಹಾರವಾಗಬೇಕು ಎಂಬುದು ಕೆಲವರ ಅಭಿಪ್ರಾಯವಾಗಿದ್ದರೆ, ಸಾರ್ವಜನಿಕರಿಗೆ ತೊಂದರೆ ಉಂಟುಮಾಡುವ ರೀತಿಯ ಪ್ರತಿಭಟನೆ ಸರಿಯಲ್ಲ ಎಂದು ಇನ್ನು ಕೆಲವರು ಆಕ್ಷೇಪ ವ್ಯಕ್ತಪಡಿಸಿದರು.

ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಮುಂದಾದರು. ರೈತರನ್ನು ಮನವೊಲಿಸಿ ಪ್ರತಿಭಟನೆ ಹಿಂತೆಗೆದುಕೊಳ್ಳುವಂತೆ ಮನವಿ ಮಾಡಿದರು.

**ಪಿಎಸ್‌ಐ ಜೊತೆ ಮಾತಿನ ಚಕಮಕಿ:** ರಸ್ತೆಗೆ ಅಡ್ಡಲಾಗಿ ನಿಲ್ಲಿಸಿದ್ದ ಟ್ರ್ಯಾಕ್ಟರ್ ಹಾಗೂ ಪವರ್ ಟಿಲ್ಲರ್‌ಗಳನ್ನು ತೆರವುಗೊಳಿಸುವಂತೆ ಪೊಲೀಸರು ಸೂಚನೆ ನೀಡಿದ ವೇಳೆ ಪಿಎಸ್‌ಐ ಮತ್ತು ರೈತರ ನಡುವೆ ಮಾತಿನ ಚಕಮಕಿ ನಡೆಯಿತು. ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ವಾಗ್ವಾದವೂ ನಡೆಯಿತು.

ಬಳಿಕ ಹಿರಿಯ ಅಧಿಕಾರಿಗಳ ಮಧ್ಯಸ್ಥಿಕೆಯಿಂದ ಪರಿಸ್ಥಿತಿ ತಿಳಿಗೊಂಡಿದ್ದು, ರೈತರು ಪ್ರತಿಭಟನೆ ಹಿಂತೆಗೆದುಕೊಂಡರು ಎಂದು ತಿಳಿದುಬಂದಿದೆ.

**ಸುರಕ್ಷತಾ ನಿಯಮವೇ? ರೈತರ ಸಂಕಷ್ಟವೇ?:** ಪ್ಲಾಸ್ಟಿಕ್ ಕ್ಯಾನ್‌ಗಳಲ್ಲಿ ಇಂಧನ ಸಂಗ್ರಹ ಮತ್ತು ಸಾಗಾಣಿಕೆಯಿಂದ ಬೆಂಕಿ ಅವಘಡ ಸಂಭವಿಸುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ತೈಲ ಕಂಪನಿಗಳು ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿವೆ. ಈ ಕಾರಣದಿಂದ ಅನೇಕ ಪೆಟ್ರೋಲ್ ಬಂಕ್‌ಗಳು ಪ್ಲಾಸ್ಟಿಕ್ ಕ್ಯಾನ್‌ಗಳಿಗೆ ಇಂಧನ ನೀಡಲು ನಿರಾಕರಿಸುತ್ತಿವೆ.

ಆದರೆ ಹೊಲಗದ್ದೆಗಳಲ್ಲಿ ಬಳಸುವ ಪಂಪ್‌ಸೆಟ್‌ಗಳು, ಟ್ರ್ಯಾಕ್ಟರ್‌ಗಳು ಹಾಗೂ ಕೃಷಿ ಯಂತ್ರೋಪಕರಣಗಳಿಗೆ ಇಂಧನ ಕೊಂಡೊಯ್ಯಲು ರೈತರು ಹೆಚ್ಚಾಗಿ ಕ್ಯಾನ್‌ಗಳನ್ನೇ ಅವಲಂಬಿಸಿದ್ದಾರೆ. ಹೀಗಾಗಿ ಕೃಷಿ ಉದ್ದೇಶಗಳಿಗಾಗಿ ಪ್ರತ್ಯೇಕ ಮಾರ್ಗಸೂಚಿ ಅಥವಾ ಸುರಕ್ಷಿತ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ.

ಒಟ್ಟಾರೆಯಾಗಿ, ಸುರಕ್ಷತಾ ನಿಯಮಗಳ ಅನುಷ್ಠಾನ ಮತ್ತು ರೈತರ ಅಗತ್ಯಗಳ ನಡುವಿನ ಸಮತೋಲನ ಸಾಧಿಸುವ ಸವಾಲು ಸರ್ಕಾರದ ಮುಂದಿದೆ. ಕೃಷಿ ಚಟುವಟಿಕೆಗಳಿಗೆ ಯಾವುದೇ ತೊಂದರೆಯಾಗದಂತೆ ಹಾಗೂ ಸಾರ್ವಜನಿಕ ಸುರಕ್ಷತೆಗೂ ಧಕ್ಕೆಯಾಗದ ರೀತಿಯಲ್ಲಿ ಸ್ಪಷ್ಟ ಮಾರ್ಗಸೂಚಿಗಳನ್ನು ರೂಪಿಸುವ ಅಗತ್ಯವಿದೆ ಎಂದು ರೈತರು ಆಗ್ರಹಿಸಿದ್ದಾರೆ.

# ಕರುಪ್ಪು ಚಿತ್ರ ಥಿಯೇಟರ್‌ನಲ್ಲಿ ಹಿಟ್, ಒಟಿಟಿಯಲ್ಲಿ ಫ್ಲಾಪ್

ತಮಿಳು ಚಿತ್ರರಂಗದ ಸ್ಟಾರ್ ನಟ ಸೂರ್ಯ ಹಾಗೂ ನಟಿ ತ್ರಿಷಾ ಅಭಿನಯದ ಬಹುನಿರೀಕ್ಷಿತ 'ಕರುಪ್ಪು' ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ಭರ್ಜರಿ ಯಶಸ್ಸು ಕಂಡು 300 ಕೋಟಿ ರೂಪಾಯಿಗೂ ಅಧಿಕ ಕಲೆಕ್ಷನ್ ಮಾಡುವ ಮೂಲಕ ದಾಖಲೆ ಬರೆದಿತ್ತು. ಬಿಡುಗಡೆಯಾದ ಕೆಲವೇ ದಿನಗಳಲ್ಲಿ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ಪಡೆದುಕೊಂಡಿದ್ದ ಚಿತ್ರ, ಈಗ ಒಟಿಟಿ ವೇದಿಕೆಗೆ ಕಾಲಿಟ್ಟಿದೆ. ಆದರೆ ಥಿಯೇಟರ್‌ನಲ್ಲಿ ಮೆಚ್ಚುಗೆ ಪಡೆದ ಈ ಚಿತ್ರ ಒಟಿಟಿಯಲ್ಲಿ ಅಷ್ಟಾಗಿ ಪ್ರಭಾವ ಬೀರುತ್ತಿಲ್ಲ ಎಂಬ ಚರ್ಚೆಗಳು ಕೇಳಿಬರುತ್ತಿವೆ.


ಚಿತ್ರ ಬಿಡುಗಡೆಯಾಗಿ ಕೇವಲ ಒಂದು ತಿಂಗಳಲ್ಲೇ ಒಟಿಟಿಗೆ ಬಂದಿರುವ 'ಕರುಪ್ಪು' ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಮಿಶ್ರ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿವೆ. ಥಿಯೇಟರ್‌ನಲ್ಲಿ ಭರ್ಜರಿ ಯಶಸ್ಸು ಕಂಡ ಚಿತ್ರ ಒಟಿಟಿ ಪ್ರೇಕ್ಷಕರನ್ನು ಅಷ್ಟಾಗಿ ಸೆಳೆಯಲು ವಿಫಲವಾಗಿದೆ ಎಂಬ ಅಭಿಪ್ರಾಯಗಳು ಕೇಳಿಬರುತ್ತಿವೆ.

'ಕರುಪ್ಪು' ಚಿತ್ರವನ್ನು ಖ್ಯಾತ ನಿರ್ದೇಶಕ ಹಾಗೂ ನಟ ಆರ್.ಜೆ. ಬಾಲಾಜಿ ನಿರ್ದೇಶಿಸಿದ್ದು, ಚಿತ್ರದಲ್ಲಿ ಅವರು ಪ್ರಮುಖ ಪ್ರತಿನಾಯಕ ಪಾತ್ರದಲ್ಲೂ ಕಾಣಿಸಿಕೊಂಡಿದ್ದಾರೆ. ಚಿತ್ರದ ಕಥ–ಾಹಂದರ, ಹಿನ್ನೆಲೆ ಸಂಗೀತ ಮತ್ತು ಮಾಸ್ ಅಂಶಗಳು ಚಿತ್ರಮಂದಿರಗಳಲ್ಲಿ ಪ್ರೇಕ್ಷಕರನ್ನು ರಂಜಿಸಿದ್ದವು. ಅದರಲ್ಲೂ ಬಾಯ್ಮಾತಿನ ಪ್ರಚಾರದಿಂದ ಸಿನಿಮಾ ವೇಗವಾಗಿ ಜನಪ್ರಿಯತೆ ಗಳಿಸಿ ಬಾಕ್ಸ್ ಆಫೀಸ್‌ನಲ್ಲಿ 300 ಕೋಟಿ ರೂಪಾಯಿಗೂ ಅಧಿಕ ಗಳಿಕೆ ಮಾಡಿತ್ತು ಎನ್ನಲಾಗುತ್ತಿದೆ.

ಆದರೆ, ಒಟಿಟಿಯಲ್ಲಿ ಚಿತ್ರವನ್ನು ವೀಕ್ಷಿಸಿದ ಅನೇಕರು ಸಿನಿಮಾ ಬಗ್ಗೆ ನಿರಾಸೆ ವ್ಯಕ್ತಪಡಿಸಿದ್ದಾರೆ. ಇದಕ್ಕೆ ಹಲವು ಕಾರಣಗಳನ್ನು ಸಿನಿಪ್ರಿಯರು ಮುಂದಿಟ್ಟಿದ್ದಾರೆ.

**ಕೇವಲ 30 ನಿಮಿಷ ಸೂರ್ಯ ಪಾತ್ರ?:** ಸಿನಿಮಾದ ಪ್ರಮುಖ ಆಕರ್ಷಣೆಯಾಗಿದ್ದ ಸೂರ್ಯ ಪಾತ್ರದ ಸ್ಕ್ರೀನ್ ಟೈಮ್ ಅಭಿಮಾನಿಗಳಿಗೆ ನಿರಾಸೆ ತಂದಿದೆ. ಚಿತ್ರದಲ್ಲಿ ಸೂರ್ಯ ಕಾಣಿಸಿಕೊಳ್ಳುವ ಅವಧಿ ಸುಮಾರು 30 ನಿಮಿಷಗಳಷ್ಟೇ ಎನ್ನಲಾಗಿದ್ದು, ಅವರ ಅಭಿಮಾನಿಗಳು ಹೆಚ್ಚಿನ ಸ್ಕ್ರೀನ್ ಪ್ರೆಸೆನ್ಸ್ ನಿರೀಕ್ಷಿಸಿದ್ದರು.

ಸೂರ್ಯ ಅವರ ಮಾಸ್ ಇಮೇಜ್ ಹಾಗೂ ಅಭಿಮಾನಿಗಳ ನಿರೀಕ್ಷೆಗೆ ತಕ್ಕಂತೆ ಪಾತ್ರವನ್ನು ಇನ್ನಷ್ಟು ವಿಸ್ತ–ರಿಸಬಹುದಿತ್ತು ಎಂಬ ಅಭಿಪ್ರಾಯಗಳು ಕೇಳಿಬರುತ್ತಿವೆ. ಇದೇ ರೀತಿಯಾಗಿ ನಟಿ ತ್ರಿಷಾ ಅವರ ಪಾತ್ರಕ್ಕೂ ನಿರೀಕ್ಷಿತ ಮಟ್ಟದ ಪ್ರಾಮುಖ್ಯತೆ ಸಿಕ್ಕಿಲ್ಲ ಎನ್ನುವುದು ಅಭಿಮಾನಿಗಳ ಅಸಮಾಧಾನಕ್ಕೆ ಕಾರಣವಾಗಿದೆ.




ಸಾಯಿ ಅಭಯಂಕರ್

ಸಂಗೀತವೇ ಚಿತ್ರದ ಶಕ್ತಿ: ಚಿತ್ರದ ಮತ್ತೊಂದು ದೊಡ್ಡ ಬಲವೆಂದರೆ ಸಂಗೀತ ನಿರ್ದೇಶಕ ಸಾಯಿ ಅಭಯಂಕರ್ ಅವರ ಹಿನ್ನೆಲೆ ಸಂಗೀತ. ಹಲವು ಪ್ರೇಕ್ಷಕರ ಅಭಿಪ್ರಾಯದ ಪ್ರಕಾರ, ಚಿತ್ರದ ಭಾವನಾತ್ಮಕ ಮತ್ತು ಮಾಸ್ ದೃಶ್ಯಗಳನ್ನು ಮತ್ತೊಂದು ಹಂತಕ್ಕೆ ಕೊಂಡೊಯ್ದಿದ್ದು ಅವರ ಸಂಗೀತ.

ವಿಶೇಷವಾಗಿ ಚಿತ್ರಮಂದಿರಗಳಲ್ಲಿ ಭರ್ಜರಿ ಸೌಂಡ್ ಸಿಸ್ಟಮ್‌ನಲ್ಲಿ ಕೇಳಿಬಂದ ಹಿನ್ನೆಲೆ ಸಂಗೀತ ಪ್ರೇಕ್ಷಕರಿಗೆ ವಿಶೇಷ ಅನುಭವ ನೀಡಿತ್ತು. ಆದರೆ ಇದೇ ಅನುಭವ ಒಟಿಟಿ ವೇದಿಕೆಯಲ್ಲಿ ಎಲ್ಲರಿಗೂ ಸಿಗುವುದಿಲ್ಲ. ಮನೆಯಲ್ಲಿನ ಸಾಮಾನ್ಯ ವೀಕ್ಷಣಾ ಅನುಭವದಲ್ಲಿ ಆ ಪರಿಣಾಮ ಕಡಿಮೆಯಾಗಿರುವುದು ಚಿತ್ರದ ಪ್ರಭಾವವನ್ನೂ ಕಡಿಮೆ ಮಾಡಿದೆ ಎಂಬ ವಿಶ್ಲೇಷಣೆಗಳು ವ್ಯಕ್ತವಾಗಿವೆ.

**ಥಿಯೇಟರ್ ಮ್ಯಾಜಿಕ್ ಒಟಿಟಿಯಲ್ಲಿ ವರ್ಕ್ ಆಗಲಿಲ್ಲವೇ?:** ಇತ್ತೀಚಿನ ವರ್ಷಗಳಲ್ಲಿ ಅನೇಕ ಸಿನಿಮಾಗಳು ಥಿಯೇಟರ್‌ನಲ್ಲಿ ಯಶಸ್ಸು ಕಂಡರೂ, ಒಟಿಟಿಯಲ್ಲಿ ಅದೇ ಮಟ್ಟದ ಪ್ರತಿಕ್ರಿಯೆ ಪಡೆಯದ ಉದಾಹರಣೆಗಳಿವೆ. ದೊಡ್ಡ ಪರದೆ, ಭರ್ಜರಿ ಧ್ವನಿ ಮತ್ತು ಪ್ರೇಕ್ಷಕರ ಸಮೂಹದ ನಡುವೆ ಅನುಭವಿಸುವ ಸಿನಿಮಾಗಳು ಕೆಲವೊಮ್ಮೆ ಒಟಿಟಿಯಲ್ಲಿ ಅದೇ ಪರಿಣಾಮ ಬೀರುವುದಿಲ್ಲ.

'ಕರುಪ್ಪು' ಕೂಡ ಇದೇ ವರ್ಗಕ್ಕೆ ಸೇರಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಚಿತ್ರದ ಮಾಸ್ ಎಲಿಮೆಂಟ್‌ಗಳು, ಆಕ್ಷನ್ ದೃಶ್ಯಗಳು ಹಾಗೂ ಸಂಗೀತ ಚಿತ್ರಮಂದಿರಗಳಲ್ಲಿ ಉತ್ತಮ ಅನುಭವ ನೀಡಿದ್ದರೂ, ಒಟಿಟಿಯಲ್ಲಿ ಪ್ರೇಕ್ಷಕರ ನಿರೀಕ್ಷೆ ವಿಭಿನ್ನವಾಗಿರುವುದರಿಂದ ಸಿನಿಮಾ ಅಷ್ಟಾಗಿ ಇಷ್ಟವಾಗಿಲ್ಲ ಎಂದು ಸಿನಿ ವಿಶ್ಲೇಷಕರು ಅಭಿಪ್ರಾಯಪಡುತ್ತಿದ್ದಾರೆ.

**ಸಾಮಾಜಿಕ ಜಾಲತಾಣಗಳಲ್ಲಿ ಮಿಶ್ರ ಪ್ರತಿಕ್ರಿಯೆ:** ಒಟಿಟಿಯಲ್ಲಿ ಸಿನಿಮಾ ಬಿಡುಗಡೆಯಾದ ಬಳಿಕ ಸಾಮಾಜಿಕ ಜಾಲತಾಣಗಳಲ್ಲಿ ಹಲವು ರೀತಿಯ ಪ್ರತಿಕ್ರಿಯೆಗಳು ವ್ಯಕ್ತವಾಗಿವೆ. ಕೆಲವರು ಚಿತ್ರವನ್ನು ಮೆಚ್ಚಿಕೊಂಡಿದ್ದರೆ, ಇನ್ನು ಕೆಲವರು "ಸೂರ್ಯಗೆ ಸ್ಕ್ರೀನ್ ಟೈಮ್ ಕಡಿಮೆ", "ಸಂಗೀತ ಹೊರತುಪಡಿಸಿ ಕಥೆಯಲ್ಲಿ ಹೊಸತನ ಇಲ್ಲ" ಹಾಗೂ "ಥಿಯೇಟರ್‌ನಲ್ಲಿ ನೋಡಿದ ಅನುಭವ ಒಟಿಟಿಯಲ್ಲಿ ಸಿಗಲಿಲ್ಲ" ಎಂದು ಅಭಿಪ್ರಾಯ ಹಂಚಿಕೊಂಡಿದ್ದಾರೆ.

ಆದಾಗ್ಯೂ, ಒಂದು ಚಿತ್ರ ಒಟಿಟಿಯಲ್ಲಿ ಮಿಶ್ರ ಪ್ರತಿಕ್ರಿಯೆ ಪಡೆದ ಮಾತ್ರಕ್ಕೆ ಅದರ ಬಾಕ್ಸ್ ಆಫೀಸ್ ಯಶಸ್ಸು ಕಡಿಮೆಯಾಗುವುದಿಲ್ಲ. ಥಿಯೇಟರ್ ಮತ್ತು ಒಟಿಟಿ ಪ್ರೇಕ್ಷಕರ ನಿರೀಕ್ಷೆಗಳು ವಿಭಿನ್ನವಾಗಿರುವುದ–ರಿಂದ, ಎರಡೂ ವೇದಿಕೆಗಳಲ್ಲಿ ಚಿತ್ರದ ಪ್ರದರ್ಶನ ಬೇರೆಬೇರೆಯಾಗಿರುವುದು ಸಾಮಾನ್ಯ ಸಂಗತಿಯಾಗಿದೆ.

ಕಾನೂನು ವ್ಯವಹಾರಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಮಾತ್ರ ಸೀಮಿತ – Judicial only Bengaluru rural district